# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 342 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ವಿಷಯ | : | ಬೀದರ್ ಜಿಲ್ಲೆಯಲ್ಲಿ ಪ್ರವಾಸೋದ್ಯಮವನ್ನು ಅಭಿವೃದ್ಧಿಗೊಳಿಸುವ ಕುರಿತು. |
| ಉತ್ತರಿಸುವ ದಿನಾಂಕ | : | 06.03.2020 |
| ಉತ್ತರಿಸುವ ಸಚಿವರು | : | ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ಮಾಡೆಲ್ ಟೂರಿಸ್ಟ್ ಡೆಸ್ಟಿನೇಷನ್ (Model Tourist Destination) ಪ್ರವಾಸಿ ತಾಣ ಯೋಜನೆಯಡಿಯಲ್ಲಿ 2016ಕ್ಕೆ ಸರ್ಕಾರದಿಂದ ಕೇಂದ್ರ ಸರ್ಕಾರಕ್ಕೆ ಸಲ್ಲಿಕೆಯಾದ ಪ್ರಸ್ತಾವನೆ ಯಾವ ಹಂತದಲ್ಲಿದೆ; ಅದಕ್ಕಾಗಿ ರಾಜ್ಯ ಸರ್ಕಾರ ಮಾಡಿರುವ ಪ್ರಯತ್ನವೇನು; ಈ ಯೋಜನೆಯನ್ನು ಮಂಜೂರು ಮಾಡುವಲ್ಲಿ ತೆಗೆದುಕೊಂಡ ಕ್ರಮವೇನು; | ಬೀದರ್ ಜಿಲ್ಲೆಯ ಮಾಡೆಲ್ ಟೂರಿಸ್ಟ್ ಡೆಸ್ಟಿನೇಷನ್ (Model Tourist Destination) ಪ್ರವಾಸಿ ತಾಣ ಯೋಜನೆಯಡಿ ಇಲಾಖೆಯಿಂದ ಕೇಂದ್ರ ಸರ್ಕಾರಕ್ಕೆ ಯಾವುದೇ ಪ್ರಸ್ತಾವನೆ ಸಲ್ಲಿಸಿರುವುದಿಲ್ಲ. |
| ಆ) | ಬೀದರ್ ಜಿಲ್ಲೆಯು ಸ್ವದೇಶ ದರ್ಶನ ಯೋಜನೆಯಡಿಯಲ್ಲಿ 2016ರಲ್ಲಿ ಟೂರಿಸಮ್ ಸರ್ಕ್ಯೂಟ್ (Bidar, Basavakalyan, Kalburgi, Bijapur, Badami, Ihole, Pattadakalu) ಇವುಗಳ ಮಧ್ಯೆ ರಾಯಲ್ ಡೆಕ್ಕನ್ ಟೂರಿಸಮ್ ಸರ್ಕ್ಯೂಟ್ ಅಭಿವೃದ್ಧಿಗೋಸ್ಕರ ಕೇಂದ್ರ ಸರ್ಕಾರಕ್ಕೆ ಸಲ್ಲಿಸಿದ ಸಮಗ್ರ ವರದಿ/ಪ್ರಸ್ತಾವನೆ ಯಾವ ಹಂತದಲ್ಲಿದೆ; ಇದನ್ನು ಜಾರಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು; | ಬೀದರ್ ಜಿಲ್ಲೆಯ ಸ್ವದೇಶ ದರ್ಶನ ಯೋಜನೆಯಡಿ ಡೆಕ್ಕನ್ ಸರ್ಕ್ಯೂಟ್ ಅಭಿವೃದ್ಧಿಪಡಿಸಲು ಕೇಂದ್ರ ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಗೆ ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯವು ಅನುಮೋದನೆ ನೀಡಬೇಕಾಗಿರುತ್ತದೆ. |
| ಇ) | ಬೀದರ್ ಜಿಲ್ಲೆಗೆ ಕೇಂದ್ರ ಸರ್ಕಾರದ ಪ್ರಸಾದ ಯೋಜನೆಯಡಿಯಲ್ಲಿ ಈಗಾಗಲೇ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿರುವ ಪ್ರಸ್ತಾವನೆ ಯಾವ ಹಂತದಲ್ಲಿದೆ; ಅದನ್ನು ಜಾರಿಗೊಳಿಸುವ ಉದ್ದೇಶ ಸರ್ಕಾರದ ಮುಂದಿದೆಯೇ; | ಬೀದರ್ ಜಿಲ್ಲೆಗೆ ಕೇಂದ್ರ ಸರ್ಕಾರದ ಪ್ರಸಾದ ಯೋಜನೆಯಡಿಯಲ್ಲಿ ಇಲಾಖೆಯಿಂದ ಯಾವುದೇ ಪ್ರಸ್ತಾವನೆಯನ್ನು ಸಲ್ಲಿಸಿರುವುದಿಲ್ಲ. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಈ) | ಬೀದರ್ ಜಿಲ್ಲೆಯು ವಿಶ್ವ ಪಾರಂಪರಿಕ ತಾಣ ಸೀರಿಯಲ್ ನಾಮಿನೇಷನ್‌ನಲ್ಲಿ ಆಯ್ಕೆಯಾಗಿದ್ದು, ಅದಕ್ಕೆ ಬೇಕಾದಂತಹ ವರದಿಯನ್ನು ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಸಲ್ಲಿಸಬೇಕಾಗಿದ್ದು, ಈ ವರದಿಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆಯೇ; ಸಲ್ಲಿಸದಿದ್ದಲ್ಲಿ, ಇದಕ್ಕೆ ಕಾರಣವೇನು? | ಬೀದರ್, ಕಲಬುರಗಿ, ಬಿಜಾಪುರದಲ್ಲಿರುವ ಸ್ಮಾರಕ ಮತ್ತು ಕೋಟೆಗಳನ್ನು ಒಳಗೊಂಡ ಸಮೂಹವನ್ನು "Monuments and Forts of Deccan Sultane" (Deccan Sultanate Architecture including Kalburgi, Bidar and Bijapur) ಎಂಬ ಶೀರ್ಷಿಕೆಯಡಿ ವಿಶ್ವ ಪರಂಪರೆ ಅಂತಿಮ ಪಟ್ಟಿಗೆ ಸೇರ್ಪಡೆಗೊಳಿಸಲು Site Management Plan and Dossier ಅನ್ನು Indian Heritage Cities Network Foundation, ಬೆಂಗಳೂರು ಇವರ ಮೂಲಕ ಸಿದ್ಧಪಡಿಸಿ ದಿನಾಂಕ: 21.01.2019ರಂದು ಪತ್ರದೊಂದಿಗೆ ಕೇಂದ್ರ ಸಂಸ್ಕೃತಿ ಮಂತ್ರಾಲಯದ ಅಧೀನದಲ್ಲಿನ ಮಹಾ ನಿರ್ದೇಶಕರು, ಭಾರತೀಯ ಪುರಾತತ್ವ ಸರ್ವೇಕ್ಷಣೆ, ನವದೆಹಲಿ ಇವರ ಮೂಲಕ ವಿಶ್ವಪರಂಪರ ಪಟ್ಟಿ ಆಯ್ಕೆ ಸಮಿತಿಯ ಪರಿಶೀಲನೆಗೆ ಸಲ್ಲಿಸಲಾಗಿದ್ದು, ಇದು ಸಮಿತಿಯ ಪರಿಶೀಲನೆಯಲ್ಲಿದೆ. |

ಕಡತ ಸಂಖ್ಯೆ: ಟಿಓಆರ್ 30 ಟಿಡಿವಿ 2020

(ಸಿ.ಟಿ.ರವಿ)
ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.